**ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆಃ 2 ನೇ ಪ್ರತಿವಾದಿ ಪರವಾಗಿ ಶ್ರೀ ಎನ್.ಸಿ.ಹೆಚ್. ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ಪ್ರತಿವಾದಿ ಪರ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

ಇಮಾಮ್ ಸಾಬ 2 ನೇ ಪ್ರತಿವಾದಿ ಪರವಾಗಿ ಬರೆದುಕೊಟ್ಟಿದ್ದ ಮರಣ ಶಾಸನ ಪತ್ರವನ್ನು ಈಗ ನೋಡಿ ಗುರುತಿಸುತ್ತಿದ್ದೇನೆ. ಸಾಕ್ಷಿ ನೋಡಿ ಗುರುತಿಸಿದ ದಾಖಲೆಯನ್ನು ಈಗಾಗಲೇ ನಿಡಿ-1 ಎಂದು ಗುರುತಿಸಲಾಗಿದೆ. ನಿಡಿ-1 ರ ದಾಖಲೆಯಲ್ಲಿ ನನ್ನ ಸಹಿ ಇದ್ದು ಅದನ್ನು ನೋಡಿ ಗುರುತಿಸುತ್ತಿದ್ದೇನೆ. ಸಾಕ್ಷಿ ತನ್ನದು ಎಂದು ನೋಡಿ ಗುರುತಿಸಿದ ಸಹಿಯನ್ನು ನಿಡಿ-1(ಎ) ಎಂದು ಗುರುತಿಸಲಾಯಿತು. ನಿಡಿ-1 ರ ದಾಖಲೆಯಲ್ಲಿ ಇಮಾಮ್ ಸಾಬ ಮತ್ತು 2 ನೇ ಪ್ರತಿವಾದಿಯ ಹೆಬ್ಬೆಟ್ಟಿನ ಗುರುತು ಇದೆ ಮತ್ತು ಅದನ್ನು ನೋಡಿ ಗುರುತಿಸುತ್ತಿದ್ದೇನೆ.

**ಪಾಟೀ ಸವಾಲುಃ ವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಚಿಂಚೋಳಿ**